ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸಂಘದ ಶಿಕ್ಷಕರ ಸಮಸ್ಯೆಗಳ ಬಗ್ಗೆ

ಶ್ರೀ ಅರಣ ಶಹಾಪುರ (ಶಿಕ್ಷಕರ ಕ್ಷೇತ್ರ):-

512(675) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸಂಘದ ಅಡಿಯಲ್ಲಿ ನ್ಯಾಯಾಲಯದ ಆದೇಶದ ಮೇರೆಗೆ ಕಳೆದ 10-15 ವರ್ಷಗಳಿಂದ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರ ಹಾಗೂ ಶಿಕ್ಷಕರ ಸಂಖ್ಯೆ ಎಷ್ಟು; (ಹೆಸರು ಸಹಿತ ಹುದ್ದೆವಾರು ಮಾಹಿತಿ ನೀಡುವುದು)

(ಆ) ಈ ಸಿಬ್ಬಂದಿಗಳಿಗೆ ನಿಗದಿಪಡಿಸಿರುವ ವೇತನ ಎಷ್ಟು; ಸದರಿ ಸಿಬ್ಬಂದಿಗಳಿಗೆ ಎಲ್ಲಿಯವರೆಗೆ ವೇತನ ಪಾವತಿಸಲಾಗಿದೆ; ಈ ಸಿಬ್ಬಂದಿಗಳಿಗೆ ಲಾಕ್‌ಡೌನ್ ಅವಧಿಯ ವೇತನ ನೀಡುವ ಕುರಿತು ಸರ್ಕಾರದ ನಿಲುವೇನು ಈಗಾಗಲೇ ಉನ್ನತ ಶಿಕ್ಷಣ ಇಲಾಖೆಯ ಅತಿಥಿ ಉಪನ್ಯಾಸಕರಿಗೆ ಲಾಕ್‌ಡೌನ್ ಅವಧಿಯ ಗೌರವಧನವನ್ನು ನೀಡಿರುವಂತೆಯೇ ಈ ಸಿಬ್ಬಂದಿಗಳಿಗೂ ನೀಡಲು ಸರ್ಕಾರ ಕ್ರಮ ವಹಿಸುವುದೇ ;

(ಇ) ಈ ಸಿಬ್ಬಂದಿಗಳಿಗೆ ಸೇವಾ ಭದ್ರತೆ ಒದಗಿಸುವ ಕುರಿತು ಹಾಗೂ ವೇತನ ಹೆಚ್ಚಳ ಮಾಡುವ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?